ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ತುಮಕೂರು ಜಿಲ್ಲೆಯ ಅರಣ್ಯ ಇಲಾಖೆ (ಸಾಮಾಜಿಕ ಅರಣ್ಯ) ವತಿಯಿಂದ ಆಗಿರುವ ಕಾಮಗಾರಿಗಳ ಬಗ್ಗೆ

ಶ್ರೀ ಕಾಂತ್‌ರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

28 (59) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2017-18, 2018-19 ಮತ್ತು 2019-20ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ವಿಭಾಗ ಎಸ್.ಇ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಹೋಬಳಿವಾರು ಮತ್ತು ಗ್ರಾಮ ಪಂಚಾಯಿತಿವಾರು ಫಲಾನುಭವಿಗಳ ವಿವರಗಳನ್ನು ನೀಡುವುದು)

(ಆ) ಸರ್ಕಾರದಿಂದ 2017-18, 2018-19 ಮತ್ತು 2019-20ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒಟ್ಟು ಅನುದಾನದ ಲಭ್ಯತೆ ಕಾಮಗಾರಿ ಅನುಷ್ಠಾನಕ್ಕಾಗಿ ಪಾರದರ್ಶಕತೆ ಕಾಯಿದೆ 2013 ರಡಿ ಕರೆದಿರುವ ಟೆಂಡರ್ ವಿವರವನ್ನು ನೀಡುವುದು;

(ಇ) ಸದರಿ ಆರ್ಥಿಕ ವರ್ಷಗಳಲ್ಲಿ ಎನ್.ಆರ್.ಐ.ಜಿ. ಯೋಜನೆ ಒಳಗೊಂಡಂತೆ ನೆಡಲಾಗಿರುವ ಸಸಿಗಳ ಸಂಖ್ಯೆ ಎಷ್ಟು; ಅವುಗಳ ಸಂರಕ್ಷಣೆ ಮತ್ತು ನಿರ್ವಹಣೆಗೆ ಖರ್ಚು ಮಾಡಿರುವ ಹಣವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಹೋಬಳಿವಾರು ಮತ್ತು ಗ್ರಾಮ ಪಂಚಾಯಿತಿವಾರು ವಿವರಗಳನ್ನೊಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು)

(ಈ) 2017 ರಿಂದ 2020ನೇ ಆರ್ಥಿಕ ವರ್ಷದಲ್ಲಿ ಸರ್ಕಾರ ಕೈಗೊಂಡಿರುವ ಯೋಜನೇತರ ವೆಚ್ಚವೆಷ್ಟು? (ಸಂಪೂರ್ಣ ವಿವರ ನೀಡುವುದು)